ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

ಸಂಖ್ಯೆ:ಇಡಿ/ಕೆಇಎ/07/ನೇ.ವಿ./2026(ಆರ್‌ಪಿಸಿ) ದಿನಾಂಕ: 19.05.2026

## ಅಧಿಸೂಚನೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ **ಉಳಿಕೆ ಮೂಲ ವೃಂದ**ದಲ್ಲಿ ಖಾಲಿಯಿರುವ ಗ್ರೂಪ್-ಸಿ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

**ನೇರ ನೇಮಕಾತಿ ಹುದ್ದೆಗಳ ವಿವರ;**

| ಕ್ರ. ಸಂ. | ಹುದ್ದೆಯ ವಿವರ | ವೇತನ ಶ್ರೇಣಿ ರೂ. | ಹುದ್ದೆಗಳ ಸಂಖ್ಯೆ |
|---|---|---|---|
| | ಪದವಿ ಮತ್ತು ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಹುದ್ದೆಗಳು | | |
| 1. | **ಪ್ರಥಮ ದರ್ಜೆ ಸಹಾಯಕ** | **44425-83700** | **02** |
| | ಪಿಯುಸಿ ಮತ್ತು ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಹುದ್ದೆಗಳು | | |
| 2. | **ದ್ವಿತೀಯ ದರ್ಜೆ ಸಹಾಯಕ** | **34100-67700** | **04** |
| | | **ಒಟ್ಟು ಹುದ್ದೆಗಳ ಸಂಖ್ಯೆ** | **06** |

**ಹುದ್ದೆಗಳ ವರ್ಗೀಕರಣದ ವಿವರ ಕೆಳಕಂಡಂತಿವೆ**

**ಪ್ರಥಮ ದರ್ಜೆ ಸಹಾಯಕ ಹುದ್ದೆಯ ವರ್ಗೀಕರಣ**

| ಮೀಸಲಾತಿ | ಇತರೆ | ಒಟ್ಟು |
|---|---|---|
| ಪ.ಜಾ. | 01 | 01 |
| ಸಾ.ಅ. | 01 | 01 |
| **ಒಟ್ಟು** | **02** | **02** |

**ದ್ವಿತೀಯ ದರ್ಜೆ ಸಹಾಯಕ ಹುದ್ದೆಯ ವರ್ಗೀಕರಣ**

| ಮೀಸಲಾತಿ | ಇತರೆ | ಮ.ಅ. | ಒಟ್ಟು |
|---|---|---|---|
| ಪ.ಜಾ. | 01 | - | 01 |
| ಪ.ಪಂ. | 01 | - | 01 |
| ಸಾ.ಅ. | 01 | 01 | 02 |
| **ಒಟ್ಟು** | **03** | **01** | **04** |

**1. ಶೈಕ್ಷಣಿಕ ವಿದ್ಯಾರ್ಹತೆ:-**

| ಕ್ರ.ಸಂ. | ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| 1. | ಪ್ರಥಮ ದರ್ಜೆ ಸಹಾಯಕ | ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯದಿಂದ ಪದವಿಯನ್ನು ಹೊಂದಿರಬೇಕು.<br>**ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರಲ್ಲಿ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಕೆಳಕಂಡಂತಿರುತ್ತದೆ.**<br>1. ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ / ಡೀಮ್ಡ್ ಹಾಗೂ ಹೊರ ರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (equivalence of degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಲಿದೆ.<br>2. ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ. ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸ್‌ಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವುದಿಲ್ಲ. |

| | | |
|---|---|---|
| 2. | ದ್ವಿತೀಯ ದರ್ಜೆ ಸಹಾಯಕ | ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ.<br>• <u>ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ ಕುರಿತು:</u><br>**ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರಲ್ಲಿ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿಯುಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.**<br>1. ಸಿ.ಬಿ.ಎಸ್.ಇ ಮತ್ತು ಐ.ಸಿ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.<br>2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.<br>3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.<br>4. ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಭ್ಯರ್ಥಿಗಳು ಎನ್.ಐ.ಓ.ಎಸ್ ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿಗೆ ತತ್ಸಮಾನ.<br>**ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019, ದಿನಾಂಕ: 06.08.2021ರಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.**<br>1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಓ.ಸಿ ಯು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.<br>2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿಯನ್ನು ಪಿ.ಯು.ಸಿಗೆ ತತ್ಸಮಾನವೆಂದು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸುವುದು.<br>**ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಟಿವಿಇ 2021, ದಿನಾಂಕ: 30.09.2021ರಲ್ಲಿ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.**<br>1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿಗೆ ತತ್ಸಮಾನವೆಂದು ಪರಿಗಣಿಸುವುದು.<br>2. 2015 ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೋಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದು. |

**ಟಿಪ್ಪಣಿ:-**

a) ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ಪ್ರಾಧಿಕಾರಕ್ಕೆ ಅಥವಾ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಎಲ್ಲಾ ಅಭ್ಯರ್ಥಿಗಳು ಅಂಕಪಟ್ಟಿ / ಪದವಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

**ಸೂಚನೆ: ಮೇಲ್ಕಂಡ ಹುದ್ದೆಗೆ ನಿಗದಿ ಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿ ಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.**

**2. ವಯೋಮಿತಿ:-**

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ 29.01.2026 ರಲ್ಲಿ ಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಿದ್ದು, ಈ ಹಿನ್ನೆಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು;

| **ವರ್ಗ** | **ನೇರ ನೇಮಕಾತಿ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿ** |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 40 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳಿಗೆ | 43 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 ಅಭ್ಯರ್ಥಿಗಳಿಗೆ | 45 ವರ್ಷಗಳು |

- ಮುಂದುವರೆದು, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಈ ಕೆಳಗಿನ ಸಂದರ್ಭದಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ. | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ. | ಮಾಜಿ ಸೈನಿಕನಾಗಿದ್ದಲ್ಲಿ | ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. "ಮಾಜಿ ಯೋಧ" ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ |
| ಇ. | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ. | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ. | ವಿಶೇಷ ಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ. | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |

| | | |
|---|---|---|
| ಋ. | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ನಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಸಕ್ಷಮ ಪ್ರಾಧಿಕಾರ ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| ಎ. | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು, ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

**3. ಅರ್ಜಿ ಸಲ್ಲಿಸುವ ವಿಧಾನ:-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ ನಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

**4. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **20.05.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **03.06.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **04.06.2026 ರ ಸಂಜೆ 4.00 ರೊಳಗೆ** |

ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಪ್ರಾಧಿಕಾರ ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

**5. ಪರೀಕ್ಷಾ ದಿನಾಂಕ:**

ಸ್ಪರ್ಧಾತ್ಮಕ ಪರೀಕ್ಷೆಯ ವಿವರವಾದ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು.

**6. ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ:**

i. **ಖಾಯಂಪೂರ್ವ ಅವಧಿ**: ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಖಾಯಂಪೂರ್ವ ಅವಧಿಯಲ್ಲಿರುತ್ತಾರೆ.

ii. **ವೇತನ ಶ್ರೇಣಿ**: 2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿ ಅನ್ವಯ;

a) 44425-1125-47800-1250-52800-1375-58300-1500-64300-1650-74200-1900-83700 - ಪ್ರಥಮ ದರ್ಜೆ ಸಹಾಯಕ ಹುದ್ದೆಗಳಿಗೆ ಅನ್ವಯ.

b) 34100-800-35700-900-39300-1000-43300-1125-47800-1250-52800-1375-58300-1500-64300-1650-67600 - ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಅನ್ವಯ.

7. **ಪಿಂಚಣಿ / ಕೆ.ಜಿ.ಐ.ಡಿ. / ಪಿ.ಎಫ್. ಯೋಜನೆ ಸೌಲಭ್ಯ ಕುರಿತು:**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31.03.2006 ರಂತೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯವನ್ನು ಅಳವಡಿಸಿಕೊಂಡಿದ್ದು, ಅನ್ವಯವಾಗುವುದು. **ಕೆ.ಜಿ.ಐ.ಡಿ. ಮತ್ತು ಪಿ.ಎಫ್ ಯೋಜನೆ ಸೌಲಭ್ಯ ಲಭ್ಯವಿರುವುದಿಲ್ಲ.**

8. **ಶುಲ್ಕ:**

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750/- (ರೂ.500 ಅರ್ಜಿ ಶುಲ್ಕ + 250 ಪ್ರಕ್ರಿಯೆ ಶುಲ್ಕ) | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯ ಲಿಂಗದ ಅಭ್ಯರ್ಥಿಗಳು | ರೂ. 500/- (ರೂ.250 ಅರ್ಜಿ ಶುಲ್ಕ + 250 ಪ್ರಕ್ರಿಯೆ ಶುಲ್ಕ) | |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ. 250/- (ಪ್ರಕ್ರಿಯೆ ಶುಲ್ಕ ಮಾತ್ರ) | |

9. **ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

I. ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆಫ್‌ಲೈನ್-ಒಎಂಆರ್ ಮಾದರಿ (Offline-OMR type)** ಯಲ್ಲಿ ನಡೆಸಲಾಗುವುದು.

II. **ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬೆಂಗಳೂರು, ಧಾರವಾಡ ಮತ್ತು ಕಲಬುರಗಿ ಕೇಂದ್ರಗಳಲ್ಲಿ ನಡೆಸಲಾಗುವುದು. (ಆಡಳಿತಾತ್ಮಕ ಉದ್ದೇಶದಿಂದ ಜಿಲ್ಲಾ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ**) ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ**)

10. **ಕನ್ನಡ ಭಾಷಾ ಪರೀಕ್ಷೆ:**

ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಮತ್ತು ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಇಲ್ಲವಾದಲ್ಲಿ, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿದ್ದು, ಗರಿಷ್ಠ 150 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ 50 ಅಂಕಗಳನ್ನು ಗಳಿಸತಕ್ಕದ್ದು. ಗೈರು ಹಾಜರಾದ / ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅರ್ಹರಾಗುವುದಿಲ್ಲ. ಈ ಪ್ರಶ್ನೆಪತ್ರಿಕೆಯನ್ನು ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಜ್ಯೇಷ್ಠತೆಗೆ ಅಥವಾ ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ.

11. ಪ್ರಶ್ನೆಪತ್ರಿಕೆ ಹಾಗೂ ಪಠ್ಯಕ್ರಮ:

- ಪ್ರಥಮ ದರ್ಜೆ ಸಹಾಯಕ - ಹುದ್ದೆಗಳಿಗೆ

| ಪತ್ರಿಕೆ / Paper | ವಿಷಯ / Subject | ಒಟ್ಟು ಪ್ರಶ್ನೆಗಳು / Total Questions | ಗರಿಷ್ಠ ಅಂಕಗಳು / Total Marks | ಅವಧಿ / Duration (ಗಂಟೆ / Hours) |
|---|---|---|---|---|
| ಪತ್ರಿಕೆ-1 | **ಸಾಮಾನ್ಯ ಜ್ಞಾನ**:- (ಎ). ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ; (ಬಿ). ಸಾಮಾನ್ಯ ವಿಜ್ಞಾನ ವಿಷಯಗಳು; (ಸಿ). ಭೂಗೋಳಶಾಸ್ತ್ರ ವಿಷಯಗಳು; (ಡಿ). ಸಮಾಜ ವಿಜ್ಞಾನ ವಿಷಯಗಳು; (ಇ). ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು; (ಎಫ್). ಭಾರತದ ಮತ್ತು ಕರ್ನಾಟಕದ ಇತಿಹಾಸ; (ಜಿ). ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ; (ಎಚ್). ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು(ಎಸ್ಎಸ್ಎಲ್‌ಸಿ ಮಟ್ಟದ); (ಐ). ಕರ್ನಾಟಕದ ಸಾಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು; (ಜೆ). ಸ್ವಾತಂತ್ರ್ಯ ನಂತರದದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಾಮಾಜಿಕ ಬದಲಾವಣೆಗಳ ವಿಷಯಗಳು; (ಕೆ). ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ: ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು; (ಎಲ್). ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು; (ಎಂ). ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು; (ಎನ್). ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು; (ಓ). ಬೌದ್ಧಿಕ ಸಾಮರ್ಥ್ಯದ ವಿಷಯಗಳು. | 100 | 100 | 2 ಗಂಟೆ |
| ಪತ್ರಿಕೆ-2 | (ಎ). ಸಾಮಾನ್ಯ ಕನ್ನಡ; (ಬಿ). ಸಾಮಾನ್ಯ ಇಂಗ್ಲೀಷ್; (ಸಿ). ಕಂಪ್ಯೂಟರ್ ಜ್ಞಾನ. | 100 | 100 | 2 ಗಂಟೆ |

- ದ್ವಿತೀಯ ದರ್ಜೆ ಸಹಾಯಕ - ಹುದ್ದೆಗಳಿಗೆ

| ಪತ್ರಿಕೆ / Paper | ವಿಷಯ / Subject | ಒಟ್ಟು ಪ್ರಶ್ನೆಗಳು / Total Questions | ಗರಿಷ್ಠ ಅಂಕಗಳು / Total Marks | ಅವಧಿ / Duration (ಗಂಟೆ / Hours) |
|---|---|---|---|---|
| ಪತ್ರಿಕೆ-1 | **ಸಾಮಾನ್ಯ ಜ್ಞಾನ**:- (ಎ). ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು; (ಬಿ). ದೈನಂದಿನ ಗ್ರಹಿಕೆಯ ವಿಷಯಗಳು; (ಸಿ). ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು; (ಡಿ). ವಿಶೇಷವಾಗಿ ಕರ್ನಾಟಕಕ್ಕೆ ಸಂಬಂಧಿಸಿದ ಭಾರತದ ಇತಿಹಾಸ; (ಇ) ಕರ್ನಾಟಕಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು; (ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು; (ಜಿ). ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ | 100 | 100 | 2 ಗಂಟೆ |

| | | | | |
|---|---|---|---|---|
| | ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪ ಕ್ರಮಗಳನ್ನು ಒಳಗೊಂಡಂತೆ ಕರ್ನಾಟಕದ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು; (ಎಚ್). ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು. | | | |
| **ಪತ್ರಿಕೆ-2** | (ಎ). ಸಾಮಾನ್ಯ ಕನ್ನಡ; (ಬಿ). ಸಾಮಾನ್ಯ ಇಂಗ್ಲೀಷ್; (ಸಿ). ಕಂಪ್ಯೂಟರ್ ಜ್ಞಾನ. | 100 | 100 | 2 ಗಂಟೆ |

i. ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು.

ii. **ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಯು ಅರ್ಹತೆಗಾಗಿ ಕನಿಷ್ಠ ಶೇ. 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ**. ಕನಿಷ್ಠ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ.

**12. ಋಣಾತ್ಮಕ ಮೌಲ್ಯಮಾಪನ(Negative Valuation):**

i. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು, ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ¼ ರಷ್ಟು (0.25) ಅಂಕಗಳನ್ನು ಕಳೆಯಲಾಗುವುದು.

ii. ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ ¼ ರಷ್ಟು (0.25) ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

**13. ಅರ್ಹತಾ ಷರತ್ತುಗಳು:**

i. ಭಾರತೀಯ ನಾಗರೀಕನಾಗಿರತಕ್ಕದ್ದು.

ii. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

iv. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರ ಅಥವಾ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

v. ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

vi. **ಯಾವುದೇ ನೈತಿಕ ಪರಿಭಾಷೆಯ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.**

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**14. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಕೋರಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು;

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ 'ಡಿ' ಯಲ್ಲಿ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ**).

**15. ಪ್ರಾಧಿಕಾರದೊಡನೆ ಪತ್ರ ವ್ಯವಹಾರ;**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**16. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ನಂತರ ಪಡೆದ ಯಾವುದೇ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರ ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.

1. ಆಧಾರ್‌ಕಾರ್ಡ್
2. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ / ವಿದ್ಯಾರ್ಹತೆಯ ಎಲ್ಲಾ ವಿಷಯಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
4. ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರ ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು(ನಿಗದಿಪಡಿಸಿದ್ದಲ್ಲಿ).

**17. ವಿಶೇಷ ಸೂಚನೆಗಳು:**

I. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.

II. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

III. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ / ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅನರ್ಹಗೊಳಿಸಲಾಗುವುದು.

IV. ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

V. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್ ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

VI. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

VII. ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

VIII. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

IX. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

X. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

**18. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: ಮಾಹಿತಿ ಕೇಂದ್ರ - 080-23460460. (10.00 AM to 6.00 PM)

**19. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವರೆಂದು, ಕಂಡುಬಂದಲ್ಲಿ ಅವರು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಗಮನಿಸಿ:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಪ್ರಾಧಿಕಾರ ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಪ್ರಾಧಿಕಾರದ ವೃಂದ ಮತ್ತು ನೇಮಕಾತಿ ಪರಿನಿಯಮಗಳು ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ. | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ. | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ. | ಪರಿಶಿಷ್ಟ ಪಂಗಡ | ST | Scheduled Tribe |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |

19/3/26

**ಕಾರ್ಯನಿರ್ವಾಹಕ ನಿರ್ದೇಶಕರು,**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಸೂಚನೆ**: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.